# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನದ ಯೋಜನೆಗಳನ್ನು ಅನುಷ್ಠಾನಗೊಳಿಸಲು ರಾಜ್ಯ ಗ್ರಂಥಾಲಯ ಸಮಿತಿಯನ್ನು ಪುನರ್ ರಚಿಸುವ ಬಗ್ಗೆ.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 75 ಎಲ್‌ಐಬಿ 2020, ದಿನಾಂಕ:16.03.2021.
2. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಾಗ್ರಂಇ/ನಿಕ/ಯೋವಿ/14/ರಾಸಪು/2023-24/ 1709, ದಿನಾಂಕ:05.07.2023

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನದ Manual Chapter V ರ ಪ್ರಕಾರ ಹಾಗೂ ಪಶ್ಚಿಮ ಬಂಗಾಳ ಸಾರ್ವಜನಿಕ ಗ್ರಂಥಾಲಯ ಕಾಯ್ದೆ 1979 Chapter II ಕ್ರ.ಸಂ-2 ರನ್ವಯ ರಾಜ್ಯದಲ್ಲಿ ಪ್ರತಿಷ್ಠಾನದ ಯೋಜನೆಗಳನ್ನು ರಾಜ್ಯದಲ್ಲಿ ತ್ವರಿತವಾಗಿ ಅನುಷ್ಠಾನಗೊಳಿಸುವ ಬಗ್ಗೆ ರಾಜ್ಯ ಗ್ರಂಥಾಲಯ ಸಮಿತಿಯನ್ನು ರಚಿಸಿ ಸದರಿ ಸಮಿತಿಯು ಆದೇಶ ಹೊರಡಿಸಿದ ದಿನಾಂಕದಿಂದ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಸಮಿತಿ ಅಸ್ತಿತ್ವಕ್ಕೆ ಬರುವವರೆಗೆ ಇವೆರಡರಲ್ಲಿ ಯಾವುದು ನಂತರವೋ ಅಲ್ಲಿಯವರೆಗೆ ಜಾರಿಯಲ್ಲಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆ ನಿರ್ದೇಶಕರ ಪ್ರಸ್ತಾವನೆಯಂತೆ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಂತೆ ರಾಜಾರಾಮ್ ಮೋಹನ್‌ರಾಯ್ ಗ್ರಂಥಾಲಯ ಪ್ರತಿಷ್ಠಾನದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ರಚಿಸಲಾಗಿರುವ ರಾಜ್ಯ ಗ್ರಂಥಾಲಯ ಸಮಿತಿಯ ಸೇವಾವಧಿಯು ದಿನಾಂಕ:16.03.2023 ರಂದು ಮುಕ್ತಾಯವಾಗಿದ್ದು ಹಾಗೂ ಕ್ರಮ ಸಂಖ್ಯೆ (6) ರಲ್ಲಿರುವ ಪ್ರೋ ಕೆ.ಬಾಲಕೃಷ್ಣ ಭಟ್, ವಿಧಾನ ಪರಿಷತ್ತಿನ ಮಾಜಿ ಸದಸ್ಯರು, ಸುರಭಿ, ಸುರತ್ಕಲ್, ದಕ್ಷಿಣ ಕನ್ನಡ ಜಿಲ್ಲೆ ರವರ ಅವಧಿಯು ಪೂರ್ಣಗೊಂಡಿರುತ್ತದೆ. ಸದರಿ ಸದಸ್ಯರ ಜಾಗದಲ್ಲಿ ರಾಜಾರಾಮ್ ಮೋಹನ್ ರಾಯ್ ಪ್ರತಿಷ್ಠಾನದ ಕೈಪಿಡಿ -5 ರನ್ವಯ ಮತ್ತೊಬ್ಬ ಸದಸ್ಯರನ್ನು ನಾಮ ನಿರ್ದೇಶನ ಮಾಡಿ ಪ್ರತಿಷ್ಠಾನದ ಯೋಜನಗಳನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಪ್ರತ್ಯೇಕ ಸಮಿತಿಯನ್ನು ಪುನರ್ ರಚಿಸಬೇಕಾಗಿರುತ್ತದೆ. ಅದರಂತೆ, ಇಲಾಖಾವತಿಯಿಂದ ಪ್ರೋ.ಕೆ. ಬಾಲಕೃಷ್ಣ ಭಟ್, ವಿಧಾನ ಪರಿಷತ್ತಿನ ಮಾಜಿ ಸದಸ್ಯರು, ಸುರಭಿ, ಸುರತ್ಕಲ್, ದಕ್ಷಿಣ ಕನ್ನಡ ಜಿಲ್ಲೆ ರವರ ಸ್ಥಳಕ್ಕೆ ಡಾ. ಸುರೇಶ್ ಜಾಂಗೆ, ಗ್ರಂಥಪಾಲಕರು ಹಾಗೂ ನ್ಯಾಕ್ ಸಂಯೋಜಕರು, ಕಲಬುರ್ಗಿ ವಿಶ್ವ ವಿದ್ಯಾನಿಲಯ, ಕಲಬುರ್ಗಿ ರವರನ್ನು ನಾಮ ನಿರ್ದೇಶನ ಮಾಡುವಂತೆ ಶಿಫಾರಸು ಮಾಡುತ್ತಾ, ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನದ ಯೋಜನೆಗಳನ್ನು ರಾಜ್ಯದಲ್ಲಿ ತ್ವರಿತವಾಗಿ ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ರಾಜ್ಯ ಗ್ರಂಥಾಲಯ ಸಮಿತಿಯನ್ನು ಪುನರ್ ರಚಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

| ಕ್ರ.ಸಂ | ವಿವರ | ಪದನಾಮ |
|---|---|---|
| 1. | ಸಾರ್ವಜನಿಕ ಗ್ರಂಥಾಲಯ ಇಲಾಖಾ ಸಚಿವರು | ಅಧ್ಯಕ್ಷರು |
| 2. | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,<br>ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು | ಸದಸ್ಯರು |
| 3. | ಮಹಾನಿರ್ದೇಶಕರು,<br>ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನ, ಕೊಲ್ಕತ್ತಾ ರವರ ಪ್ರತಿನಿಧಿ. | ಸದಸ್ಯರು |
| 4. | ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನದಿಂದ ರಾಜ್ಯದ ಪ್ರತಿನಿಧಿಯಾಗಿ ನಾಮಕರಣ ಗೊಂಡವರು. | ಸದಸ್ಯರು |
| 5. | ಅಧ್ಯಕ್ಷರು ಅಥವಾ ಕಾರ್ಯದರ್ಶಿಗಳು, ರಾಜ್ಯ ಗ್ರಂಥಾಲಯ ಸಂಘ | ಸದಸ್ಯರು |
| 6. | ಡಾ. ಸುರೇಶ್ ಜಾಂಗೆ,<br>ವಿಶ್ವ ವಿದ್ಯಾಲಯದ ಗ್ರಂಥಪಾಲಕರು ಹಾಗೂ ನ್ಯಾಕ್ ಸಂಯೋಜಕರು, ಕೇಂದ್ರ ಗ್ರಂಥಾಲಯ, ಜ್ಞಾನಗಂಗಾ, ಕಲಬುರ್ಗಿ ವಿಶ್ವ ವಿಧ್ಯಾನಿಲಯ, ಕಲಬುರ್ಗಿ | ಸದಸ್ಯರು |
| 7. | ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ಬೆಂಗಳೂರು. | ಸದಸ್ಯ ಕಾರ್ಯದರ್ಶಿ |

.....2

ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಪಿ 69 ಎಲ್‌ಐಬಿ 2023, ದಿನಾಂಕ:19.09.2023.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜಾರಾಂ ಮೋಹನರಾಯ್ ಗ್ರಂಥಾಲಯ ಪ್ರತಿಷ್ಠಾನದ ಯೋಜನೆಗಳನ್ನು ರಾಜ್ಯದಲ್ಲಿ ತ್ವರಿತವಾಗಿ ಅನುಷ್ಠಾನಗೊಳಿಸುವ ಬಗ್ಗೆ ಈ ಕೆಳಕಂಡಂತೆ ರಾಜ್ಯ ಗ್ರಂಥಾಲಯ ಸಮಿತಿಯನ್ನು ಸರ್ಕಾರ ರಚಿಸಿದೆ.

| ಕ್ರ.ಸಂ | ವಿವರ | ಪದನಾಮ |
|---|---|---|
| 01 | ಗ್ರಂಥಾಲಯ ಇಲಾಖಾ ಸಚಿವರು | ಅಧ್ಯಕ್ಷರು |
| 02 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು | ಸದಸ್ಯರು |
| 03 | ಮಹಾ ನಿರ್ದೇಶಕರು, ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನ, ಕೋಲ್ಕತ್ತಾರವರ ಪ್ರತಿನಿಧಿ | ಸದಸ್ಯರು |
| 04 | ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನ ದಿಂದ ರಾಜ್ಯದ ಪ್ರತಿನಿಧಿಯಾಗಿ ನಾಮಕರಣಗೊಂಡವರು | ಸದಸ್ಯರು |
| 05 | ಅಧ್ಯಕ್ಷರು ಅಥವಾ ಕಾರ್ಯದರ್ಶಿಗಳು, ರಾಜ್ಯ ಗ್ರಂಥಾಲಯ ಸಂಘ | ಸದಸ್ಯರು |
| 06 | ಶ್ರೀ ಚಿದಾನಂದ ಸಾಲಿ,<br>ಕನ್ನಡ ಪ್ರಾಧ್ಯಾಪಕರು ಹಾಗೂ ಲೇಖಕರು | ಸದಸ್ಯರು |
| 07 | ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು | ಸದಸ್ಯ ಕಾರ್ಯದರ್ಶಿ |

ಈ ಸಮಿತಿಯ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಎರಡು ವರ್ಷಗಳ ಅವಧಿಗೆ ಅಥವಾ ಮುಂದಿನ ಸಮಿತಿ ಅಸ್ತಿತ್ವಕ್ಕೆ ಬರುವವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಜಾರಿಯಲ್ಲಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

19/9/23

(ಶರಣಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಸಾಮಾನ್ಯ).

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವ ಸಲುವಾಗಿ.

ಪ್ರತಿಗಳು:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
4. ಸಂಬಂಧಪಟ್ಟ ಸದಸ್ಯರಿಗೆ – (ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರ ಮುಖಾಂತರ).
5. ಮಹಾ ನಿರ್ದೇಶಕರು, ರಾಜಾರಾಮ್ ಮೋಹನ್ ರಾಯ್ ಗ್ರಂಥಾಲಯ ಪ್ರತಿಷ್ಠಾನ, ಕೋಲ್ಕತ್ತಾ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.